# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 37
2. ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಉಮಾಶ್ರೀ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 13.02.2024
4. ಉತ್ತರಿಸುವ ಸಚಿವರು : ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
| --- | --- | --- |
| ಅ) | ಸುಮಾರು 400 ಕೋಟಿ ರೂ ವೆಚ್ಚದಲ್ಲಿ ನಿರ್ಮಿಸಿರುವ ನೆಲಮಂಗಲ ಸಮೀಪದ ದಾಸನಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ)ಗೆ ಹಲವಾರು ತಿಂಗಳಿಂದ ವರ್ತಕರು, ಗ್ರಾಹಕರು, ರೈತರಿಲ್ಲದೇ ಇಲ್ಲಿನ ವಹಿವಾಟು ಬಹುತೇಕ ಸ್ಥಗಿತಗೊಳ್ಳುವ ಹಂತಕ್ಕೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು. |
| ಆ) | ಈ ಎಪಿಎಂಸಿ ಮಾರುಕಟ್ಟೆಯು ಸೂಕ್ತ ನಿರ್ವಹಣೆಯಿಲ್ಲದೇ, ಕೆಲವು ಮಳಿಗೆಗಳ ಕಬ್ಬಿಣದ ಬಾಗಿಲುಗಳು ತುಕ್ಕು ಹಿಡಿದಿರುವುದಲ್ಲದೇ, ಕಾವಲುಗಾರರಿಲ್ಲದೇ ಕಳುವು ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಲೋಪವನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು; | ಬಂದಿದೆ.<br><br>ದಾಸನಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕೆಲವು ಮಳಿಗೆಗಳು ಹಂಚಿಕೆಯಾಗದೆ, ಉಪಯೋಗಿಸದೇ ಇರುವುದರಿಂದ ಕಬ್ಬಿಣದ ಬಾಗಿಲುಗಳು ತುಕ್ಕು ಹಿಡಿದಿದ್ದು, ಹಂಚಿಕೆಯ ಸಮಯದಲ್ಲಿ ದುರಸ್ತಿಗೆ ಕ್ರಮ ವಹಿಸಲಾಗುತ್ತದೆ.<br><br>ಕಳುವು ಪ್ರಕರಣಗಳ ಬಗ್ಗೆ ಸಮಿತಿಗೆ ಯಾವುದೇ ದೂರು ದಾಖಲಾಗಿರುವುದಿಲ್ಲ. ಅಲ್ಲದೇ, ದಾಸನಪುರ ಉಪ ಮಾರುಕಟ್ಟೆಯಲ್ಲಿ ಮೆ.ಸೆಕ್ಯೂರಿಟಿ ಅಂಡ್ ಪ್ರೊಟೆಕ್ಷನ್ ಸರ್ವೀಸಸ್ ಭದ್ರತಾ ಏಜನ್ಸಿಯಿಂದ ಭದ್ರತಾ ಸಿಬ್ಬಂದಿಗಳನ್ನು ನೇಮಿಸಿ ಭದ್ರತಾ ನಿರ್ವಹಣೆ ಕೈಗೊಳ್ಳಲಾಗುತ್ತಿದೆ. |
| ಇ) | ಯಾವ ಕಾಲಮಿತಿಯಲ್ಲಿ ದಾಸನಪುರ ಎಪಿಎಂಸಿ ಮಾರುಕಟ್ಟೆಯಲ್ಲಿ ಮಳಿಗೆಗಳನ್ನು ಸ್ಥಳಾಂತರಿಸಿ ಸೂಕ್ತ ರೀತಿಯಲ್ಲಿ ವ್ಯಾಪಾರ ವಹಿವಾಟಗಳನ್ನು ನಡೆಸಲು ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು) | ದಾಸನಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಯಶವಂತಪುರ ಮುಖ್ಯ ಮಾರುಕಟ್ಟೆ ಪ್ರಾಂಗಣದಿಂದ ದಾಸನಪುರ ಉಪಮಾರುಕಟ್ಟೆ ಪ್ರಾಂಗಣಕ್ಕೆ ಈರುಳ್ಳಿ, ಆಲೂಗಡ್ಡೆ, ಶುಂಠಿ ಮತ್ತು ಬೆಳ್ಳುಳ್ಳಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ಸಂಪೂರ್ಣವಾಗಿ ಸ್ಥಳಾಂತರಿಸುವ ನಿಟ್ಟಿನಲ್ಲಿ ದಾಸನಪುರದಲ್ಲಿ ಲಭ್ಯವಿರುವ ಮಳಿಗೆಗಳನ್ನು ಹಂಚಿಕೆ ಮಾಡಲು ಪ್ರಕಟಣೆ ಹೊರಡಿಸಲಾಗಿದ್ದು, ಸದರಿ ಪ್ರಕಟಣೆಗೆ |

....2

| | | |
|---|---|---|
| | | ಹಾಗೂ ದಾಸನಪುರ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ, ಶುಂಠಿ ಉತ್ಪನ್ನಗಳನ್ನು ಮಾತ್ರ ನಿಯಂತ್ರಣ ಕಕ್ಷೆಗೆ ಒಳಪಡಿಸಿರುವ ಕೇಂದ್ರ ಕಛೇರಿಯ ದಿನಾಂಕ:24.02.2023ರ ಅಧಿಸೂಚನೆಯ ವಿರುದ್ಧ ವಿವಿಧ ವರ್ತಕರು ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ 5452/2023, 5455/2022, 4132/2023, 3221/2023, 4124/2023, 5077/2023, 4123/2023ರ ಪ್ರಕರಣಗಳನ್ನು ದಾಖಲಿಸಿದ್ದು, ಮಾನ್ಯ ನ್ಯಾಯಾಲಯದ ತೀರ್ಪನ್ನು ನಿರೀಕ್ಷಿಸಲಾಗಿದೆ. |

**ಸಂಖ್ಯೆ: ಸಿಒ 42 ಎಂಆರ್‌ಇ 2024**

**(ಶಿವಾನಂದ ಎಸ್. ಪಾಟೀಲ)**
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು.